# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ

## ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ. 10/2019**

**ದೋ.ಸಾ. : 18 ಫ್ರಾ.ಸಾ. :51**

| | | |
|---|---|---|
| ಸಾಕ್ಷಿಯ ಹೆಸರು | : | ನಾಗೇಶ ಹನುಮಂತಪ್ಪ ಗುದಗಿ |
| ತಂದೆಯ ಹೆಸರು | : | ಹನುಮಂತಪ್ಪ ಗುದಗಿ |
| ವಯಸ್ಸು | : | 51 ವರ್ಷ |
| ಕೆಲಸ | : | ಕೂಲಿ ಕೆಲಸ |
| ವಾಸ | : | ಸದಾಶಿವಗಡ್, ಕಾರವಾರ |

**ದಿನಾಂಕಃ 21-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ-**

1. ಸಾಕ್ಷಿಗೆ ಈಗ ತೋರಿಸಿದ ನೋಟಿಸಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸದರಿ ನೋಟಿಸನ್ನು ನಿಪಿ-128 ಎಂದು, ಸಾಕ್ಷಿಯ ಸಹಿಯನ್ನು ನಿಪಿ-128(ಎ) ಎಂದು ಗುರುತಿಸಲಾಯಿತು. ದಿ.01-01-2019 ರಂದು ಕಾರವಾರದ ನಗರ ಠಾಣೆಯ ಪೊಲೀಸರು ಸಂಜೆ 7.00 ಗಂಟೆಗೆ ನನ್ನನ್ನು ಠಾಣೆಗೆ ಕರೆಸಿದ್ದರು. ಅದರಂತೆ, ನಾನು ಠಾಣೆಗೆ ಹೋದಾಗ, ಅಲ್ಲಿ ಪೊಲೀಸರು ಒಂದು ಚೈನನ್ನು ಅಕ್ಕಸಾಲಿಗರಿಂದ ಪರಿಶೀಲಿಸಿದರು. ಅಕ್ಕಸಾಲಿಗರು ಅದನ್ನು ಪರಿಶೀಲಿಸಿ, ಅದು ಬಂಗಾರದ ಚೈನ್ ಎಂದು ಹೇಳಿ ತೂಕ ಮಾಡಿದಾಗ ಅದು 12 ಗ್ರಾಂ.ಚಿಲ್ಲರೆ ಇರುತ್ತದೆ. ಅದನ್ನು ಪೊಲೀಸರು ಒಂದು ಪೇಪರಿನಲ್ಲಿ ಗಂಟು ಕಟ್ಟಿ ಪಂಚನಾಮೆ ಮಾಡಿ ನನ್ನ ಸಹಿಯನ್ನು ಪಡೆದುಕೊಂಡರು. ನಿಪಿ-91 ಪಂಚನಾಮೆಯಲ್ಲಿ ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿಪಿ-91(ಎ) ಎಂದು ಗುರುತಿಸಲಾಯಿತು. ಈಗ ನ್ಯಾಯಾಲಯದ ಮುಂದಿರುವ ಎಂ.ಓ-4 ಬಂಗಾರದ ಚೈನನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯ ಸಮಯದಲ್ಲಿ ಚೈನನ್ನು ಸುತ್ತಿಟ್ಟ ಪೇಪರಿನ ಮೇಲೆ ಇರುವ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಎಂ.ಓ-4/1 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ಸಾಕ್ಷಿಯ ಸಹಿಯನ್ನು ನಿಪಿ-4/1(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದಃ-**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿ ಪರ ಶ್ರೀ ಎಲ್.ಎಸ್.ಕೆ. ವಕೀಲರಿಂದಃ-**

ಈ ದಿನ ನ್ಯಾಯಾಲಯದಲ್ಲಿ 2 ಮತ್ತು 3 ನೇ ಆರೋಪಿತರ ಪರ ವಕೀಲರು ಹಾಜರಿಲ್ಲದ ಕಾರಣ, 2 ಮತ್ತು 3 ನೇ ಆರೋಪಿತರು ಸ್ವತಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ರೂ.700/- ಖರ್ಚು ನೀಡುವ ಷರತ್ತಿನೊಂದಿಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

**ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎನ್.ವಿ.ಎನ್. ವಕೀಲರಿಂದಃ-**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 5 ನೇ ಆರೋಪಿ ಶ್ರೀ ಹೆಚ್ ಎಸ್ ಎಸ್ ವಕೀಲರಿಂದಃ-**

ಈ ದಿನ ನ್ಯಾಯಾಲಯದಲ್ಲಿ 5 ನೇ ಆರೋಪಿ ಪರ ವಕೀಲರು ಹಾಜರಿಲ್ಲದ ಕಾರಣ, 5 ನೇ ಆರೋಪಿಯು ಸ್ವತಃ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

Sd/-

(ಮಾಯಣ್ಣ ಬಿ.ಎಲ್.)

2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಉತ್ತರಕನ್ನಡ, ಕಾರವಾರ.